ದಿನಾಂಕಃ 06-06-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.

ಪಾಟೀ ಸವಾಲು ಃ ಎದುರುದಾರರ ಪರ ವಕೀಲರಿಂದ

ನಾನು ಈ ಅರ್ಜಿಯನ್ನು ನನ್ನ ಸಹೋದರರ ವಿರುದ್ಧ ಸಲ್ಲಿಸಿರುತ್ತೇನೆ. ಮೂಲ ದಾವೆ ವಜಾ ಆಗಿದ್ದು ಅದರ ಪುನರ್ ವಿಚಾರಣೆಗಾಗಿ ಈ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಮೂಲ ದಾವಾ ಸಂಖ್ಯೆ 255/2019 ಯಾವ ಕಾರಣಕ್ಕೆ ವಜಾ ಆಗಿರುತ್ತದೆ ಎಂದು ನನಗೆ ನಿಖರವಾಗಿ ಗೊತ್ತಿಲ್ಲ. ಸದರಿ ದಾವೆ 2022 ರಲ್ಲಿ ವಜಾ ಆಗಿದ್ದು ನಿಖರವಾದ ದಿನಾಂಕ ಹೇಳಲಾಗುವುದಿಲ್ಲ. ನಾನು ಉದ್ದೇಶ ಪೂರ್ವಕವಾಗಿ ನ್ಯಾಯಾಲಯಕ್ಕೆ ಗೈರು ಹಾಜರಾದ ಕಾರಣ ದಾವೆ ವಜಾ ಆಗಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಕಣ್ಣಿನ ಶಸ್ತ್ರ ಚಿಕಿತ್ಸೆ ಆದ ಕಾರಣ ನ್ಯಾಯಾಲಯಕ್ಕೆ ಹಾಜರಾಗಲು ಆಗಲಿಲ್ಲ ಎಂದು ಹೇಳುತ್ತಾರೆ. ಆದರೆ ಯಾವ ವರ್ಷದಲ್ಲಿ ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡಿರುತ್ತೇನೆ ಎಂದು ನನಗೆ ನೆನಪಿಲ್ಲ. ದಿಃ 04-01-2020 ರಿಂದ 08-01-2020 ರವರೆಗೆ ನಾನು ಚಿಕಿತ್ಸೆ ಮಾಡಿಸಿಕೊಂಡು ಆಸ್ಪತ್ರೆಯಲ್ಲಿ ದಾಖಲಾಗಿದ್ದೆ ಎಂದರೆ ಸರಿ. ಅಲ್ಲಿಂದ ಬಂದ ನಂತರ ಸಾಕ್ಷಿ ನುಡಿಯಲು ನ್ಯಾಯಾಲಯಕ್ಕೆ ಬರಲಿಲ್ಲ ಎಂದರೆ, ಸಾಕ್ಷಿಯು ಆಗ ಕೊರೊನಾ ಸಾಂಕ್ರಾಮಿಕ ಕಾಯಿಲೆ ಇತ್ತು ಎಂದು ನುಡಿದಿರುತ್ತಾರೆ. 2020-2021 ರಲ್ಲಿ ಕೊರೊನಾ ಸಾಂಕ್ರಾಮಿಕ ಕಾಯಿಲೆ ಇತ್ತು ಎಂದರೆ ಸರಿ. 2022 ರಲ್ಲಿ ಕೊರೊನಾ ಇರದಿದ್ದರೂ ಸಹ ನಾನು ಉದ್ದೇಶ ಪೂರ್ವಕವಾಗಿ ನ್ಯಾಯಾಲಯಕ್ಕೆ ಗೈರು ಹಾಜರಾಗಿರುತ್ತೇನೆ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಬಂದಾಗ ನನಗೆ ದಾವೆ ವಜಾ ಆದ ಬಗ್ಗೆ ಗೊತ್ತಾಗಿರುತ್ತದೆ. ಎದುರುದಾರರಿಗೆ ತೊಂದರೆ ಕೊಡಲು ನಾನು ಉದ್ದೇಶಪೂರ್ವಕವಾಗಿ ನ್ಯಾಯಾಲಯಕ್ಕೆ ಹಾಜರಾಗಿರಲಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ ಹೇ ಕೇ ಸರಿ ಇದೆ.

ಪ್ರಧಾನ ಜೆ.ಎಮ್.ಎಫ್.ಸಿ., ಸಿಂಧನೂರು.